**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**05.11.2024** **18.40 hrs**

**<><*<><>*><>**

ಮುಖ್ಯಾಂಶಗಳು

- **ಮುಡಾ ಪ್ರಕರಣ ; ನಾಳೆ ಲೋಕಾಯುಕ್ತ ವಿಚಾರಣೆಗೆ ಹಾಜರಾಗಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಲೋಕಾಯುಕ್ತ ದಾಖಲಿಸಿರುವ ಎಫ್ಐಆರ್ ದುರುದ್ದೇಶ ಪೂರಿತ ; ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ**
- **ವಿಧಾನಸಭಾ ಉಪಚುನಾವಣೆ - ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಪ್ರಧಾನಿ ದೇವೇಗೌಡರಿಂದ ಮತಯಾಚನೆ**
- **ಭಾರತ್ ಬ್ರ್ಯಾಂಡ್ ಎರಡನೇ ಹಂತಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ; ಸಬ್ಸಿಡಿ ದರದಲ್ಲಿ ಗೋಧಿಹಿಟ್ಟು, ಅಕ್ಕಿ ಮಾರಾಟ**
- **ದತ್ತಮಾಲಾ ಅಭಿಯಾನ ಹಿನ್ನೆಲೆ ; ಇದೇ ೯, ೧೦ ರಂದು ಪ್ರವಾಸಿ ತಾಣಗಳಿಗೆ ಚಿಕ್ಕಮಗಳೂರು ಜಿಲ್ಲಾಡಳಿತ ನಿಷೇಧ**

**<><*<><>*><>**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಆರೋಪದಡಿಯಲ್ಲಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ವಿರುದ್ಧದ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕೋರಲಾದ ಅರ್ಜಿಗೆ ಸಂಬಂಧಿಸಿದಂತೆ ಹೈಕೋರ್ಟ್ ಸಿದ್ದರಾಮಯ್ಯ ಹಾಗೂ ಸಿಬಿಐಗೆ ನೋಟಿಸ್ ಜಾರಿಗೊಳಿಸಿದೆ. ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ, ಮಲ್ಲಿಕಾರ್ಜುನ ಸ್ವಾಮಿ, ಜಮೀನು ಮಾಲೀಕ ಜೆ.ದೇವರಾಜು ಅವರಿಗೂ ನೋಟಿಸ್ ಜಾರಿ ಮಾಡಿದ್ದು, ಅರ್ಜಿಯ ವಿರುದ್ಧ ಯಾವುದೇ ಆಕ್ಷೇಪಣೆ ಇದ್ದರೆ ಸಲ್ಲಿಸುವಂತೆ ಸೂಚಿಸಿದೆ.ನ್ಯಾಯಮೂರ್ತಿ ನಾಗಪ್ರಸನ್ನ ನೇತೃತ್ವದ ಪೀಠ ವಿಚಾರಣೆಯನ್ನು ಈ ತಿಂಗಳ ೨೬ಕ್ಕೆ ಮುಂದೂಡಿದೆ. ಪ್ರಕರಣ ಸಂಬಂಧ ನಡೆದ ತನಿಖೆಯ ವರದಿಯನ್ನು ಇದೇ ೨೬ರ ಒಳಗೆ ನ್ಯಾಯಾಲಯಕ್ಕೆ ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಹೈಕೋರ್ಟ್ ಸೂಚನೆ ನೀಡಿದೆ. ಈ ನಡುವೆ ಮುಡಾ ವಿಚಾರಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತರು ನೋಟಿಸ್ ನೀಡಿದ್ದು, ನಾಳೆ ವಿಚಾರಣೆಗೆ ಹಾಜರಾಗುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತಾನಾಡಿದ ಅವರು, ಲೋಕಾಯುಕ್ತ ನೋಟೀಸ್ ನೀಡಿದ್ದರಿಂದ ಮೈಸೂರು ಲೋಕಾಯುಕ್ತ ಕಚೇರಿಗೆ ಹಾಜರಾಗಿ ವಿಚಾರಣೆ ಎದುರಿಸುತ್ತೇನೆ ಎಂದು ಪ್ರತಿಕ್ರಿಯಿಸಿದ್ದಾರೆ. ಲೋಕಾಯುಕ್ತದಿಂದ

ನೋಟಿಸ್ ಬಂದಾಗ ಯಾರೇ ಆದರೂ ಹಾಜರಾಗಲೇಬೇಕು. ಲೋಕಾಯುಕ್ತ ಸಂಸ್ಥೆ ಎಲ್ಲದಕ್ಕಿಂತಲೂ ದೊಡ್ಡದು ಎಂದು ಹುಬ್ಬಳ್ಳಿಯಲ್ಲಿ ಸಚಿವ ಸತೀಶ್ ಜಾರಕಿ ಹೊಳಿ ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಲೋಕಾಯುಕ್ತ ಪೊಲೀಸರು ಎಫ್ಐಆರ್ ದಾಖಲಿಸಿದ್ದಾರೆ. ಪ್ರಕರಣದಲ್ಲಿ ಪುತ್ರ ನಿಖಿಲ್ ಕುಮಾರಸ್ವಾಮಿ, ೨ನೇ ಆರೋಪಿಯಾಗಿದ್ದು, ಜೆಡಿಎಸ್ ಪಕ್ಷದ ಮುಖಂಡ ಸಿ.ಬಿ. ಸುರೇಶ್ ಬಾಬು ಅವರನ್ನು ೩ನೇ ಆರೋಪಿ ಎಂದು ಪರಿಗಣಿಸಲಾಗಿದೆ. ಈ ಕುರಿತಂತೆ ಚನ್ನಪಟ್ಟಣದಲ್ಲಿ ಪ್ರತಿಕ್ರಿಯಿಸಿರುವ ಕುಮಾರಸ್ವಾಮಿ, ಐಪಿಎಸ್ ಅಧಿಕಾರಿಯೊಬ್ಬರ ದೂರಿನ ಮೇರೆಗೆ ಲೋಕಾಯುಕ್ತ ಪೊಲೀಸರು ದಾಖಲು ಮಾಡಿರುವ ಎಫ್ಐಆರ್ ಹಾಸ್ಯಾಸ್ಪದ ಹಾಗೂ ದುರುದ್ದೇಶಪೂರಿತ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದಕ್ಕೆ ನ್ಯಾಯಾಲಯದ ಮೂಲಕವೇ ಉತ್ತರ ನೀಡಲಾಗುವುದು ಎಂದು ತಿಳಿಸಿದ್ದಾರೆ. ಇದೊಂದು ಷಡ್ಯಂತ್ರವಾಗಿದ್ದು, ಇಂತಹ ನೂರು ಎಫ್ಐಆರ್ ಗಳು ದಾಖಲಾದರೂ ಧೃತಿಗೆಡಲ್ಲ ಎಂದು ಹೇಳಿದ್ದಾರೆ.

**<><*<><>*><>**

ರಾಜ್ಯದಲ್ಲಿ ವಿಧಾನಸಭಾ ಉಪಚುನಾವಣೆಗೆ ಪ್ರಚಾರ ಬಿರುಸುಗೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಖಾನ್ ಪಠಾಣ್ ಪರ ಮತ ಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಪುತ್ರನಿಗೆ ಟಿಕೆಟ್ ನೀಡಿರುವುದು ಕುಟುಂಬ ರಾಜಕಾರಣ ಅಲ್ಲವೇ ಎಂದು ಪ್ರಶ್ನಿಸಿದರು. ಮುಡಾ ಪ್ರಕರಣದಲ್ಲಿ ಬಿಜೆಪಿ ನಾಯಕರು ಸುಳ್ಳು ಹೇಳುವ ಮೂಲಕ ತೇಜೋವಧೆ ಮಾಡುತ್ತಿದ್ದಾರೆ. ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡುವ ಮೂಲಕ ಅವರಿಗೆ ತಕ್ಕ ಉತ್ತರ ನೀಡುವಂತೆ ಕರೆ ನೀಡಿದರು. ರಾಜ್ಯ ಸರ್ಕಾರ ಐದು ಗ್ಯಾರಂಟಿಗಳ ಮೂಲಕ ಇಡೀ ರಾಜ್ಯದ ಮಹಿಳೆಯರಿಗೆ ಆರ್ಥಿಕ ಶಕ್ತಿ ನೀಡಿದೆ ಎಂದರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವಿರೂಪಾಕ್ಷಿಪುರ ಗ್ರಾಮದಲ್ಲಿ ಎನ್.ಡಿ.ಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಪ್ರಚಾರ ನಡೆಸಿದರು. ವಿರೋಧ ಪಕ್ಷದ ನಾಯಕ ಆರ್.ಅಶೋಕ ಸೇರಿದಂತೆ ಹಲವರು ಮತ ಯಾಚಿಸಿದರು. ಚನ್ನಪಟ್ಟಣ ತಾಲ್ಲೂಕಿನ ಕೋಡಂಬಳ್ಳಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ತಾಂಡ್ಯ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಮತ್ತು ಡಿ.ಕೆ.ಸುರೇಶ್ ಚುನಾವಣಾ ಪ್ರಚಾರ ನಡೆಸಿದರು. ಇನ್ನೊಂದೆಡೆ ಸಂಡೂರಿನಲ್ಲೂ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಪರ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ತಿಮಲಾಪುರ, ಏಳುಗಂಜಿಯಲ್ಲಿ ಪ್ರಚಾರ ನಡೆಸಿದರು. ಈ

ವೇಳೆ ಮಾತನಾಡಿದ ಅವರು, ಕೋವಿಡ್ ಸಮಯದಲ್ಲಿ ಯಾವುದೇ ಸಮುದಾಯಕ್ಕೆ ಬಿಜೆಪಿ ಸರ್ಕಾರ ನೆರವು ನೀಡಿಲ್ಲ ಎಂದು ಆರೋಪಿಸಿದರು. ಕಲ್ಯಾಣ ಕರ್ನಾಟಕ ಭಾಗದ ಜನರ ಬದುಕು ಸಂವಿಧಾನದ ೩೭೧/ಜೆ ವಿಧಿ ಮೂಲಕ ಬದಲಾಗಿದ್ದು, ಗ್ಯಾರಂಟಿ ಯೋಜನೆಗಳಿಂದ ಜನರಿಗೆ ಆರ್ಥಿಕ ಶಕ್ತಿ ದೊರೆತಿದೆ ಎಂದು ಉಪಮುಖ್ಯಮಂತ್ರಿಯವರು ತಿಳಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡುವುದು ಖಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟಾಚಾರದ ಸಂಬಂಧ ರಾಜ್ಯದ ಜನತೆಗೆ ಮುಖ್ಯಮಂತ್ರಿಯವರು ಉತ್ತರ ನೀಡಬೇಕು ಎಂದು ಹೇಳಿದ್ದಾರೆ. ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣ, ವಕ್ಫ್ ವಿವಾದ ಮೂಲಕ ಮಠ ಮಾನ್ಯಗಳ ಜಮೀನು ಕಸಿಯುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಭಾರತ್ ಅಕ್ಕಿ ಮತ್ತು ಗೋಧಿ ಹಿಟ್ಟು ಮಾರಾಟದ ಎರಡನೇ ಹಂತಕ್ಕೆ ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವ ಪ್ರಲ್ಹಾದ್ ಜೋಷಿ ದೆಹಲಿಯ ಕೃಷಿ ಭವನದಲ್ಲಿಂದು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಕೇಂದ್ರೀಯ ಭಂಡಾರ, ರಾಷ್ಟ್ರೀಯ ಸಹಕಾರಿ ಗ್ರಾಹಕ ಒಕ್ಕೂಟ, ನಫೆಡ್ ಜೊತೆಯಾಗಿ ಇ-ಕಾಮರ್ಸ್ ಅಂಗಡಿಗಳು, ವಾಣಿಜ್ಯ ಮತ್ತು ದೊಡ್ಡ ಸರಣಿಯ ಚಿಲ್ಲರೆ ವ್ಯಾಪಾರಿಗಳು ಹಾಗೂ ಮೊಬೈಲ್ ವ್ಯಾನ್ ಗಳ ಮೂಲಕ ಭಾರತ್ ಬ್ರ್ಯಾಂಡ್ ಅಕ್ಕಿಯನ್ನು ಪ್ರತಿ ಕೆ.ಜಿಗೆ ೩೪ ರೂಪಾಯಿ, ಗೋಧಿ ಹಿಟ್ಟನ್ನು ೩೦ ರೂಪಾಯಿ ದರದಲ್ಲಿ ಒದಗಿಸುವ ಮೂಲಕ ಗ್ರಾಹಕರಿಗೆ ನೀಡುವ ಗುರಿ ಹೊಂದಿದೆ ಎಂದು ತಿಳಿಸಿದ್ದಾರೆ. ಭಾರತ್ ಅಕ್ಕಿ ಮತ್ತು ಗೋಧಿ ಹಿಟ್ಟನ್ನು ಕೈಗೆಟಕುವ ಬೆಲೆಯಲ್ಲಿ ಮಾರಾಟ ಮಾಡುವ ಜೊತೆಗೆ ಮಾರುಕಟ್ಟೆಯಲ್ಲಿನ ಬೆಲೆಗಳು ಸುಧಾರಿಸುವುದು ಮತ್ತು ಗ್ರಾಹಕರಿಗೆ ಉಪಯೋಗ ಕಲ್ಪಿಸುವುದು ಕೇಂದ್ರ ಸರ್ಕಾರದ ಆದ್ಯತೆಯಾಗಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ದತ್ತಪೀಠದಲ್ಲಿ ದತ್ತ ಮಾಲೆ ಅಭಿಯಾನ ಆರಂಭಗೊಂಡಿದೆ. ಈ ಹಿನ್ನೆಲೆಯಲ್ಲಿ ಇದೇ ತಿಂಗಳ ೯ ಮತ್ತು ೧೦ ರಂದು ಮುಳ್ಳಯ್ಯನಗಿರಿ ಶ್ರೇಣಿಗೆ ಪ್ರವಾಸಿಗರ ಭೇಟಿಗೆ ನಿಷೇಧ ಹೇರಲಾಗಿದೆ. ಜಿಲ್ಲೆಯ ಕೆಲ ಪ್ರವಾಸಿತಾಣಗಳಿಗೆ ಪ್ರವಾಸಿಗರು ಭೇಟಿ ನೀಡುವುದನ್ನು ಜಿಲ್ಲಾಧಿಕಾರಿ ಮೀನಾ ನಾಗರಾಜ್ ನೀಷೇಧಿಸಿ ಆದೇಶ ಹೊರಡಿಸಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ದತ್ತ

ಮಾಲಾಧಾರಿಗಳು ಅಂದು ದತ್ತಪೀಠಕ್ಕೆ ದರ್ಶನಕ್ಕಾಗಿ ಆಗಮಿಸಲಿದ್ದು ವಾಹನ ದಟ್ಟಣೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ದತ್ತಪೀಠ, ಮುಳ್ಳಯ್ಯನಗಿರಿ, ಗಾಳಿಕೆರೆ, ಮಾಣಿಕ್ಯಧಾರ, ಸೀತಾಳಯ್ಯನಗಿರಿ ಪ್ರದೇಶಗಳಿಗೆ ಪ್ರವಾಸಿಗರ ಭೇಟಿ ನಿಷೇಧಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ವಿಜಯಪುರ ನಗರಕ್ಕೆ ಅಲಮಟ್ಟಿ ಹಿನ್ನೀರಿನಿಂದ ಕುಡಿಯುವ ನೀರು ಪೂರೈಸುವ ಸುಮಾರು ೧೦.೮ ಕಿಲೋ ಮೀಟರ್ ಉದ್ದದ ಕೊಳವೆ ಮಾರ್ಗಕ್ಕೆ ೫೨ ಕೋಟಿ ವೆಚ್ಚದಲ್ಲಿ ಹೊಸ ಪೈಪ್ ಅಳವಡಿಸಲಾಗುವುದು ಎಂದು ವಿಜಯಪುರ ಜಿಲ್ಲಾ ಉಸ್ತುವರಿ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ಧಾರೆ. ವಿಧಾನಸೌಧದಲ್ಲಿ ವಿಜಯಪುರ ನಗರದ ಕುಡಿಯುವ ನೀರು ಸರಬರಾಜು ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಬಳಿಕ ಮಾತನಾಡಿದ ಅವರು ಬಬಲೇಶ್ವರ ಮತ್ತು ತಿಕೋಟಾ ಪಟ್ಟಣಗಳ ಜನತೆಗೆ ಸದ್ಯ ೫೫ ಎಲ್‌ಪಿಸಿಡಿ ಕುಡಿಯುವ ನೀರು ಪೂರೈಸುತ್ತಿದ್ದು ೧೩೫ ಎಲ್‌ಪಿಸಿಡಿ ನೀರು ಸರಬರಾಜು ಮಾಡಲಾಗುವುದು ಎಂದು ತಿಳಿಸಿದ್ದಾರೆ. ವಿಜಯಪುರ ನಗರದಲ್ಲಿ ಕೇಂದ್ರ ಸರಕಾರದ ಅಮೃತ್ ೨.೦ ಯೋಜನೆಯ ಕಾಮಗಾರಿ ವಿಳಂಬವಾಗಿದ್ದು ಕಾಮಗಾರಿಯ ಗುತ್ತಿಗೆ ಪಡೆದಿರುವ ಜೈನ್ ಇರಿಗೇಶನ್ ಸಂಸ್ಥೆಗೆ ನೋಟಿಸ್ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಯಲ್ಲಿ  ಡಿಸೆಂಬರ್ ೨೦, ೨೧, ೨೨ರಂದು  ೩ ದಿನಗಳ ಕಾಲ ನಡೆಯಲಿರುವ ಅಖಿಲ ಭಾರತ  ಕನ್ನಡ ಸಾಹಿತ್ಯ ಸಮ್ಮೇಳನದ ವಿವಿಧ ಸಮಿತಿಗಳಿಗೆ ಬಿಡುಗಡೆಯಾಗುವ ಅನುದಾನವನ್ನು ಯಾವುದೇ ಲೋಪವಾಗದಂತೆ ಪಾರದರ್ಶಕವಾಗಿ ವೆಚ್ಚ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ. ೮೭ ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ಸಮಿತಿಗಳ ಸಂಚಾಲಕರು ಹಾಗೂ ಸದಸ್ಯ ಕಾರ್ಯದರ್ಶಿಗಳು ತಮ್ಮ ಸಮಿತಿಗೆ ಬಿಡುಗಡೆಯಾಗುವ ಅನುದಾನಕ್ಕೆ ಕ್ರಿಯಾಯೋಜನೆ ಸಿದ್ಧಪಡಿಸಬೇಕು. ಬಳಿಕ ಸಮಿತಿಯಲ್ಲಿ ಮಂಡಿಸಿ ಸಾಹಿತ್ಯ ಸಮ್ಮೇಳನದ ವಿಶೇಷಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ತುಮಕೂರು ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಜಲ ಜೀವನ್ ಮಿಷನ್-ಮನೆ-ಮನೆ ಗಂಗೆ ಯೋಜನೆಯ ಕಾಮಗಾರಿಗಳಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳದ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ತಿಳಿಸಿದ್ದಾರೆ. ಜಲ್ ಜೀವನ್ ಮಿಷನ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಜನೆ ಅನುಷ್ಠಾನದಲ್ಲಿ ಯಾವುದೇ ಅಕ್ರಮ ನಡೆಯದಂತೆ

ನಿಗಾವಹಿಸಬೇಕು. ಕಾಮಗಾರಿಯಲ್ಲಿ ಯಾವುದೇ ಲೋಪದೋಷಗಳು ಕಂಡು ಬಂದಲ್ಲಿ ಅವುಗಳನ್ನು ಸರಿಪಡಿಸುವ ಜವಾಬ್ದಾರಿ ಗುತ್ತಿಗೆದಾರರ ಮೇಲಿರುತ್ತದೆ ಎಂದು ಹೇಳಿದರು.

<><*<><>*><>

ಮನ್ರೇಗಾ ಕಾರ್ಯಕ್ರಮದ ಮೂಲಕ ಜನರ ಹಕ್ಕನ್ನು ಸಾಕಾರಗೊಳಿಸಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಲಪಡಿಸುವುದು ಕಾಯಕ ಬಂಧುಗಳ ಜವಾಬ್ದಾರಿಯಾಗಿದೆ ಎಂದು ವಿಜಯನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಹ್ಮದ್ ಅಕ್ರಂ ಶಾ ತಿಳಿಸಿದ್ದಾರೆ. ಹೊಸಪೇಟೆಯ ತಾಲೂಕು ಪಂಚಾಯಿತಿಯಲ್ಲಿ ಗ್ರಾಮಸ್ವ ರಾಜ್ಯದ ಕಾಯಕ ಬಂದುಗಳ ಜಿಲ್ಲಾ ಮಟ್ಟದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಈ ತರಬೇತಿ ನರೇಗಾ ಯೋಜನೆಯ ಅಡಿಯಲ್ಲಿ ಅನುಷ್ಠಾನದಲ್ಲಿ ಅತ್ಯಂತ ಮಹತ್ವದ ಪಡೆದುಕೊಂಡಿದೆ ಎಂದರು. ತರಬೇತಿ ಕಾರ್ಯಕ್ರಮ ೧೦ ದಿನಗಳ ಕಾಲ ನಡೆಯಲಿದ್ದು, ಬಳ್ಳಾರಿ ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ೪೮ ಅಭ್ಯರ್ಥಿಗಳು ತರಬೇತಿ ಪಡೆಯಲಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಕೋಲಾರ ಜಿಲ್ಲಾದ್ಯಂತ ಇದೇ ತಿಂಗಳ ೧೧ ರಂದು ಒನಕೆ ಓಬವ್ವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಂಗಳ ತಿಳಿಸಿದ್ದಾರೆ.

೨. ಪ್ರಸಕ್ತ ಸಾಲಿನಲ್ಲಿ ಪ್ರವೇಶಾತಿ ಪಡೆದು ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಪ್ರಧಾನ ಮಂತ್ರಿ ಶಿಷ್ಯವೇತನ ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಇದೇ ತಿಂಗಳ ೩೦ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ ಔಓಐlಓಇ.ಏS಼ಃ.ಉಔಗಿ.lಓ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ ಡಾ. ಸಿ.ಎ. ಹಿರೇಮಠ ದಾವಣಗೆರೆಯಲ್ಲಿಂದು ತಿಳಿಸಿದ್ದಾರೆ.

೩. ಬಾಲ್ಯ ವಿವಾಹ ಪ್ರಕರಣಗಳಲ್ಲಿ ನಿಯಮಾನುಸಾರ ಸಂಬಂದಪಟ್ಟವರ ಮೇಲೆ ಎಫ್.ಐ.ಆರ್ ದಾಖಲಿಸದೆ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದ್ದಾರೆ.

೪. ಉತ್ತರಕನ್ನಡ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಲ್ಲಾ ಇಲಾಖೆಗಳ ಅನುಸೂಚಿತ ಜಾತಿ ಉಪ ಹಂಚಿಕೆ ಮತ್ತು ಅನುಸೂಚಿತ ಪಂಗಡ ಉಪ ಹಂಚಿಕೆ ಯೋಜನೆಯಲ್ಲಿ ಸಂಪೂರ್ಣ ಗುರಿ ಸಾಧಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಈಶಾನ್ಯ ಮಾನ್ಸೂನ್ ಸಾಮಾನ್ಯವಾಗಿತ್ತು. ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ರಾಜ್ಯದಲ್ಲಿ ಅತಿ ಹೆಚ್ಚಿನ ಗರಿಷ್ಠ ಉಷ್ಣಾಂಶ ೩೪.೮ ಕಾರವಾರದಲ್ಲಿ, ಅತಿ ಕಡಿಮೆ ಉಷ್ಣಾಂಶ ೧೪.೫ ಡಿಗ್ರಿ ಸೆಲ್ಸಿಯಸ್ ವಿಜಯಪುರದಲ್ಲಿ ದಾಖಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ, ಕೊಡಗು, ಮೈಸೂರು, ಚಾಮರಾಜನಗ ಜಿಲ್ಲೆಗಳ ಒಂದೆರೆಡು ಕಡೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರಿನ ಸುತ್ತಮುತ್ತ ಮೋಡ ವಾತಾವರಣವಿದ್ದು, ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಗರಿಷ್ಠ ೩೦, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ <>*><>**